# ಕರ್ನಾಟಕ ವಿಧಾನ ಪರಿಷತ್ತು

## ನೂರ ಐವತ್ತಾರನೆಯ ಅಧಿವೇಶನ

## <u>ಕಾರ್ಯಕಲಾಪಗಳ ಪಟ್ಟಿ</u>

**ಮಂಗಳವಾರ, ದಿನಾಂಕ:19ನೇ ಆಗಸ್ಟ್, 2025**
**(ಸಮಯ: ಬೆಳಗ್ಗೆ 10.00 ಗಂಟೆಗೆ)**

* * *

### 01. ಪ್ರಶ್ನೋತ್ತರ

ಅ) ಸದನದಲ್ಲಿ ಉತ್ತರಿಸುವ ಪ್ರಶ್ನೆಗಳು : ಆರನೆಯ ಪಟ್ಟಿ

ಆ) ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳು : ಆರನೆಯ ಪಟ್ಟಿ

### 02. ಶೂನ್ಯವೇಳೆ ಪ್ರಸ್ತಾವಗಳು

### 03. ವರದಿಗಳನ್ನೊಪ್ಪಿಸುವುದು

ಅ. **ಶ್ರೀ ಶರವಣ ಟಿ.ಎ. (ಅಧ್ಯಕ್ಷರು, ಕರ್ನಾಟಕ ವಿಧಾನ ಪರಿಷತ್ತಿನ ಸರ್ಕಾರಿ ಭರವಸೆಗಳ ಸಮಿತಿ)** ಅವರು 2023–24 ಮತ್ತು 2024–25ನೇ ಸಾಲಿನ ಕರ್ನಾಟಕ ವಿಧಾನ ಪರಿಷತ್ತಿನ ಸರ್ಕಾರಿ ಭರವಸೆಗಳ ಸಮಿತಿಯ 50ನೇ ವರದಿಯನ್ನೊಪ್ಪಿಸುವುದು.

ಆ. **ಶ್ರೀ ಡಿ.ಟಿ. ಶ್ರೀನಿವಾಸ್(ಡಿ.ಟಿ.ಎಸ್.) (ಸದಸ್ಯರು, ಕರ್ನಾಟಕ ವಿಧಾನಮಂಡಲದ ಸ್ಥಳೀಯ ಸಂಸ್ಥೆಗಳ ಮತ್ತು ಪಂಚಾಯತ್ ರಾಜ್ ಸಂಸ್ಥೆಗಳ ಸಮಿತಿ)** ಅವರು ಕರ್ನಾಟಕ ವಿಧಾನಮಂಡಲದ ಸ್ಥಳೀಯ ಸಂಸ್ಥೆಗಳ ಮತ್ತು ಪಂಚಾಯತ್ ರಾಜ್ ಸಂಸ್ಥೆಗಳ ಸಮಿತಿಯ 43ನೇ ವರದಿಯನ್ನೊಪ್ಪಿಸುವುದು.

ಇ. **ಶ್ರೀ ಕಿಶೋರ್ ಕುಮಾರ್ ಪುತ್ತೂರ್ (ಸದಸ್ಯರು, ಕರ್ನಾಟಕ ವಿಧಾನಮಂಡಲದ ಸಭೆಯ ಮುಂದಿಡಲಾದ ಕಾಗದ ಪತ್ರಗಳ ಸಮಿತಿ)** ಅವರು ಕರ್ನಾಟಕ ವಿಧಾನಮಂಡಲದ ಸಭೆಯ ಮುಂದಿಡಲಾದ ಕಾಗದ ಪತ್ರಗಳ ಸಮಿತಿಯ 40ನೇ ವರದಿಯನ್ನೊಪ್ಪಿಸುವುದು.

ಈ. **ಶ್ರೀ ಎ. ವಸಂತ ಕುಮಾರ್ (ಸದಸ್ಯರು, ಕರ್ನಾಟಕ ವಿಧಾನಮಂಡಲದ ಅಧೀನ ಶಾಸನ ರಚನಾ ಸಮಿತಿ)** ಅವರು ಕರ್ನಾಟಕ ವಿಧಾನಮಂಡಲದ ಅಧೀನ ಶಾಸನ ರಚನಾ ಸಮಿತಿಯ 53ನೇ ವರದಿಯನ್ನೊಪ್ಪಿಸುವುದು.

.2..

## 04. ಸಭೆಯ ಮುಂದಿಡಲಾಗುವ ಕಾಗದ ಪತ್ರಗಳು

**ಶ್ರೀ ಸಿದ್ದರಾಮಯ್ಯ (ಮಾನ್ಯ ಮುಖ್ಯಮಂತ್ರಿಗಳು) ಅವರು:-**

1. ಮಾರ್ಚ್ 2023-2024ಕ್ಕೆ ಕೊನೆಗೊಂಡ ವರ್ಷಕ್ಕೆ ಭಾರತದ ಲೆಕ್ಕನಿಯಂತ್ರಕರು ಮತ್ತು ಮಹಾಲೆಕ್ಕಪರಿಶೋಧಕರ ರಾಜ್ಯದ ಹಣಕಾಸಿನ ವ್ಯವಹಾರಗಳ ಲೆಕ್ಕಪರಿಶೋಧನಾ ವರದಿ (2025ರ ವರದಿ ಸಂಖ್ಯೆ-4) ಯನ್ನು ಸಭೆಯ ಮುಂದಿಡುವುದು.

2. ಮಾರ್ಚ್ 2023ಕ್ಕೆ ಕೊನೆಗೊಂಡ ವರ್ಷಕ್ಕೆ ಭಾರತದ ಲೆಕ್ಕನಿಯಂತ್ರಕರು ಮತ್ತು ಮಹಾಲೆಕ್ಕಪರಿಶೋಧಕರ ರಾಜ್ಯ ಕಂದಾಯದ ವರದಿ (2025ನೇ ವರ್ಷದ ವರದಿ ಸಂಖ್ಯೆ-5) ಯನ್ನು ಸಭೆಯ ಮುಂದಿಡುವುದು.

3. 2020-2022ನೇ ಸಾಲಿನ ಪಂಚಾಯತ್ ರಾಜ್ ಸಂಸ್ಥೆಗಳು ಮತ್ತು ನಗರ ಸ್ಥಳೀಯ ಸಂಸ್ಥೆಗಳ ಮೇಲಿನ ಸಂಯೋಜಿತ ವಾರ್ಷಿಕ ತಾಂತ್ರಿಕ ಪರಿಶೀಲನಾ ವರದಿಯನ್ನು ಸಭೆಯ ಮುಂದಿಡುವುದು

4. ಮಾರ್ಚ್ 2023ಕ್ಕೆ ಕೊನೆಗೊಂಡ ವರ್ಷಕ್ಕೆ ಭಾರತದ ಲೆಕ್ಕನಿಯಂತ್ರಕರು ಮತ್ತು ಮಹಾಲೆಕ್ಕಪರಿಶೋಧಕರ ಅನುಸರಣಾ ಲೆಕ್ಕಪರಿಶೋಧನೆ ವರದಿ (2025ನೇ ವರ್ಷದ ವರದಿ ಸಂಖ್ಯೆ-3) ಯನ್ನು ಸಭೆಯ ಮುಂದಿಡುವುದು.

## 05. ವಿಶೇಷ ಸದನ ಸಮಿತಿ ಕಾಲಾವಕಾಶವನ್ನು ವಿಸ್ತರಿಸುವ ಪ್ರಸ್ತಾವ

**ಶ್ರೀ ನಿರಾಣಿ ಹಣಮಂತ್ ರುದ್ರಪ್ಪ (ಅಧ್ಯಕ್ಷರು, ವಿಶೇಷ ಸದನ ಸಮಿತಿ) ಅವರು:-**

"ರಾಜ್ಯದ ವಿವಿಧ ನಿಗಮಗಳಲ್ಲಿ ಗಂಗಾ ಕಲ್ಯಾಣ ಯೋಜನೆಯಡಿ ಕೈಗೊಂಡಿರುವ ಕಾಮಗಾರಿಗಳಲ್ಲಿ ನಡೆದಿರುವ ಅವ್ಯವಹಾರಗಳ ಸಂಬಂಧ ಪರಿಶೀಲಿಸಿ ವರದಿಯನ್ನು ಸಲ್ಲಿಸಲು ರಚಿಸಲಾಗಿರುವ ವಿಶೇಷ ಸದನ ಸಮಿತಿಯು ತನ್ನ ವರದಿಯನ್ನು ಸಲ್ಲಿಸಲು ದಿನಾಂಕ:22.04.2025ರಿಂದ 06 ತಿಂಗಳುಗಳ ಕಾಲಾವಕಾಶವನ್ನು ಸದನದ ಸಹಮತಿಯನ್ನು ಕಾಯ್ದಿರಿಸಿ ವಿಸ್ತರಿಸಲಾಗಿರುವ ಪ್ರಸ್ತಾವನೆಗೆ ಸದನದ ಸಹಮತಿ ಕೋರಿ ಪ್ರಸ್ತಾವವನ್ನು ಮಂಡಿಸುವುದು".

## 06. ಗಮನ ಸೆಳೆಯುವ ಸೂಚನೆಗಳು

01. **ಶ್ರೀ ಪುಟ್ಟಣ್ಣ ಹಾಗೂ ಶ್ರೀ ಎಸ್.ಎಲ್. ಭೋಜೇಗೌಡ** ಅವರುಗಳು ಕೋಲಾರ ತಾಲ್ಲೂಕು ರಾಷ್ಟ್ರೀಯ ಹೆದ್ದಾರಿ 75 ರಿಂದ ನರಸಾಪುರ ಗ್ರಾಮದ ಮೂಲಕ ಹಾದು ಹೋಗುವ ರಾಷ್ಟ್ರೀಯ ಹೆದ್ದಾರಿಯ ಹೆಚ್.ಎಲ್. ಸಂಖ್ಯೆ:345/2, 366 ಮತ್ತು ಇನ್ನಿತರೆ ನಿವೇಶನದಾರರ ಖಾತೆಗಳನ್ನು ರದ್ದುಗೊಳಿಸಿರುವ ಕುರಿತು ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರ ಗಮನ ಸೆಳೆಯುವುದು.

02. **ಶ್ರೀ ಐವನ್ ಡಿ'ಸೋಜಾ** ಅವರು ಭಾರತ ಸಂವಿಧಾನದ ಅನುಚ್ಛೇದ 341(1)ರಂತೆ ಪರಿಶಿಷ್ಟ ಜಾತಿ ಪಟ್ಟಿಯಲ್ಲಿರುವ ಕುಡುಬಿ ಸಮುದಾಯದ ಹೆಸರು **"**ದಿ ಷೆಡ್ಯೂಲ್ಡ್ ಕ್ಯಾಸ್ಟಸ್ ಅಂಡ್ ಷೆಡ್ಯೂಲ್ಡ್ ಟ್ರೈಬ್ಸ್ ಲಿಸ್ಟ್ (ಮಾಡಿಫಿಕೇಷನ್) ಆರ್ಡರ್ 1956**"** ರಲ್ಲಿ ಬಿಟ್ಟುಹೋಗಿದ್ದು, ಕುಡುಬಿ ಜಾತಿಯ ಹೆಸರನ್ನು ಸೇರಿಸುವ ಬಗ್ಗೆ ಕೇಂದ್ರ ಸರ್ಕಾರಕ್ಕೆ ಶಿಫಾರಸ್ಸು ಮಾಡಲು ಕ್ರಮಕೈಗೊಳ್ಳುವ ಬಗ್ಗೆ ಮಾನ್ಯ ಮುಖ್ಯ ಮಂತ್ರಿಗಳ ಗಮನ ಸೆಳೆಯುವುದು.

03. **ಶ್ರೀ ಟಿ.ಎನ್. ಜವರಾಯಿ ಗೌಡ** ಅವರು ಬಾರಗೇನಹಳ್ಳಿ ಸುತ್ತಮುತ್ತಲಿನ ಕಂದಾಯ ಇಲಾಖೆಗೆ ಸೇರಿದ ಗೋಮಾಳ ಜಮೀನಿನಲ್ಲಿ ಹೊರೈಜೂನ್ ಇಂಡಸ್ಟ್ರಿಯಲ್ ಕಂಪನಿಯು ಕಾನೂನು ಬಾಹಿರವಾಗಿ ಬಂಡೆಗಳ ಸ್ಫೋಟ ಮತ್ತು ಕ್ರಷರ್ ಚಟುವಟಿಕೆಗಳಿಂದ ಸುತ್ತಮುತ್ತಲಿನ ಪ್ರದೇಶದ ಪರಿಸರ ಹಾಳಾಗಿರುವುದರಿಂದ, ಹೊರೈಜೂನ್ ಇಂಡಸ್ಟ್ರಿಯಲ್ ಕಂಪನಿಯ 125 ಎಕರೆಯ ಗೋಮಾಳ ಜಮೀನನ್ನು ಸರ್ಕಾರದ ವಶಕ್ಕೆ ತೆಗೆದುಕೊಳ್ಳುವ ಕುರಿತು ಮಾನ್ಯ ಕಂದಾಯ ಸಚಿವರ ಗಮನ ಸೆಳೆಯುವುದು.

04. **ಡಾ: ಉಮಾಶ್ರೀ** ಅವರು ಮೈಸೂರು ವಿಶ್ವವಿದ್ಯಾಲಯದಲ್ಲಿ ಪಿಹೆಚ್‌ಡಿ ಸಾಮಾನ್ಯ ಪ್ರವೇಶ ಪರೀಕ್ಷೆ ತೇರ್ಗಡೆಯಾಗಿ ಅರ್ಹತೆ ಹೊಂದಿದ ಎಲ್ಲಾ ವರ್ಗದ ವಿದ್ಯಾರ್ಥಿಗಳಿಗೆ ಮಾರ್ಗದರ್ಶಕರ ಕೊರತೆ ಉಂಟಾಗಿರುವ ಕುರಿತು ಮಾನ್ಯ ಉನ್ನತ ಶಿಕ್ಷಣ ಸಚಿವರ ಗಮನ ಸೆಳೆಯುವುದು.

05. **ಶ್ರೀ ಶಶೀಲ್ ಜಿ. ನಮೋಶಿ** ಅವರು 1995ರ ನಂತರದಲ್ಲಿ ಸ್ಥಾಪನೆಯಾಗಿರುವ ಕನ್ನಡ ಮಾಧ್ಯಮ ಖಾಸಗಿ ಶಾಲಾ ಕಾಲೇಜುಗಳನ್ನು ವೇತನ ಅನುದಾನಕ್ಕೆ ಒಳಪಡಿಸುವ ಬಗ್ಗೆ ಮಾನ್ಯ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರ ಗಮನ ಸೆಳೆಯುವುದು.

06. **ಶ್ರೀ ತಿಪ್ಪಣ್ಣಪ್ಪ ಕಮಕನೂರ** ಅವರು ಬೆಂಗಳೂರಿನಲ್ಲಿ ಸರ್ಕಾರದಿಂದ ನಿಜಶರಣ ಅಂಬಿಗರ ಚೌಡಯ್ಯ ಪ್ರತಿಮೆಯನ್ನು ಚಾಲುಕ್ಯ ವೃತ್ತದಲ್ಲಿರುವ ಜಗಜ್ಯೋತಿ ಬಸವೇಶ್ವರರ ಪ್ರತಿಮೆಯ ಪಕ್ಕದಲ್ಲಿರುವ ಜವಾಹರಲಾಲ್ ನೆಹರೂ ಪ್ಲಾನಿಟೋರಿಯಂಗೆ ಹೊಂದಿಕೊಂಡಿರುವ ಜಾಗದಲ್ಲಿ ಸ್ಥಾಪಿಸುವ ಬಗ್ಗೆ ಮಾನ್ಯ ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರ ಗಮನ ಸೆಳೆಯುವುದು.

## 07. ನಿಯಮ 330ರ ಮೇರೆಗೆ

01. **ಶ್ರೀಯುತರುಗಳಾದ ಸಿ.ಟಿ. ರವಿ, ಎಸ್.ವ್ಹಿ. ಸಂಕನೂರ, ನಿರಾಣಿ ಹಣಮಂತ್ ರುದ್ರಪ್ಪ, ಎನ್. ರವಿಕುಮಾರ್, ಮಾನ್ಯ ವಿರೋಧ ಪಕ್ಷದ ಮುಖ್ಯ ಸಚೇತಕರು, ಛಲವಾದಿ ಟಿ. ನಾರಾಯಣಸ್ವಾಮಿ, ಮಾನ್ಯ ವಿರೋಧ ಪಕ್ಷದ ನಾಯಕರು ಹಾಗೂ ಇತರರು** ರಾಜ್ಯದಲ್ಲಿ ಬಾಲಕಿಯರ ಮತ್ತು ಮಹಿಳೆಯರ ಮೇಲೆ ದೌರ್ಜನ್ಯ, ಕೊಲೆ, ಅತ್ಯಾಚಾರ, ಗಲಭೆ, ಸುಲಿಗೆ, ಡ್ರಗ್ಸ್ ಹಾಗೂ ಇನ್ನಿತರೆ ಅಪರಾಧ ಪ್ರಕರಣಗಳನ್ನು ತಡೆಯುವಲ್ಲಿ ಕಾನೂನು ಸುವ್ಯವಸ್ಥೆ ವಿಫಲವಾಗಿರುವ ಕುರಿತು ಪ್ರಸ್ತಾಪಿಸುವುದು. (ಮಾನ್ಯ ಗೃಹ ಸಚಿವರು)

02. **ಶ್ರೀಯುತರುಗಳಾದ ಛಲವಾದಿ ಟಿ. ನಾರಾಯಣಸ್ವಾಮಿ, ಮಾನ್ಯ ವಿರೋಧ ಪಕ್ಷದ ನಾಯಕರು, ಎನ್. ರವಿಕುಮಾರ್, ಮಾನ್ಯ ವಿರೋಧ ಪಕ್ಷದ ಮುಖ್ಯ ಸಚೇತಕರು, ಮಾನ್ಯ ಶಾಸಕರುಗಳಾದ ಸಿ.ಟಿ. ರವಿ, ಸುನೀಲ್ ವಲ್ಯಾಪುರ್, ಎಸ್.ಎಲ್. ಭೋಜೇಗೌಡ ಹಾಗೂ ಇತರರು** ಪರಿಶಿಷ್ಠ ಜಾತಿ ಅಡಿಯಲ್ಲಿ ಬರುವ ವಿವಿಧ ಸಮುದಾಯಗಳಿಗೆ ಒಳಮೀಸಲಾತಿಯನ್ನು ಅನುಷ್ಠಾನಗೊಳಿಸುವ ಕುರಿತು ಪ್ರಸ್ತಾಪಿಸುವುದು. (ಮಾನ್ಯ ಸಮಾಜ ಕಲ್ಯಾಣ ಸಚಿವರು)

03. **ಶ್ರೀಯುತರುಗಳಾದ ರಾಮೋಜಿಗೌಡ, ಪುಟ್ಟಣ್ಣ ಹಾಗೂ ಡಿ.ಟಿ. ಶ್ರೀನಿವಾಸ್(ಡಿ.ಟಿ.ಎಸ್)** ಅವರುಗಳು ಕರ್ನಾಟಕದಲ್ಲಿ ಶೈಕ್ಷಣಿಕ ಗುಣಮಟ್ಟವನ್ನು ವೃದ್ಧಿಸುವ ಸಂಬಂಧ ಸರ್ಕಾರದಿಂದ ಶೈಕ್ಷಣಿಕ ಕಾನೂನುಗಳಿಗೆ ತಿದ್ದುಪಡಿ ತಂದು ಕಾರ್ಯಯೋಜನೆಗಳನ್ನು ಅನುಷ್ಠಾನಗೊಳಿಸುವ ಕುರಿತು ಪ್ರಸ್ತಾಪಿಸುವುದು. (ಮಾನ್ಯ ಶಾಲಾ ಶಿಕ್ಷಣ ಹಾಗೂ ಸಾಕ್ಷರತಾ ಸಚಿವರು)

04. **ಶ್ರೀ ಡಿ.ಎಸ್. ಅರುಣ್** ಅವರು 7ನೇ ವೇತನ ಆಯೋಗದ ವರದಿ ಅನ್ವಯ ದಿನಾಂಕ:01.07.2022ರಿಂದ ಜಾರಿಗೆ ಬರುವಂತೆ ವಿಶೇಷಚೇತನ ಸರ್ಕಾರಿ ನೌಕರರಿಗೆ ವಾಹನ ಖರೀದಿಸಲು ರೂ.60,000/-ಗಳ ಮಿತಿ ಅಥವಾ ವಾಹನ ದರದ ಶೇಕಡ 40ರಷ್ಟು ಹೆಚ್ಚಿಸುವ ಕುರಿತು ಪ್ರಸ್ತಾಪಿಸುವುದು. (ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಸಚಿವರು)

05. **ಶ್ರೀ ಗೋವಿಂದರಾಜು** ಅವರು ರಾಜ್ಯ ಸರ್ಕಾರ ಹೊಸ ಮಧ್ಯದಂಗಡಿಗಳ ಅನುಮತಿಗೆ ಸಂಬಂಧಿಸಿದ ಸಿ.ಎಲ್-7 ಸನ್ನಧಿಗೆ ನಿಗದಿಪಡಿಸಿರುವ ನಿಯಮಗಳನ್ನು ಗಾಳಿಗೆ ತೂರಿ ಪ್ರವಾಸೋದ್ಯಮದ ಹೆಸರಿನಲ್ಲಿ ಅಕ್ರಮವಾಗಿ ಮಧ್ಯ ಮಾರಾಟ ಮಾಡುತ್ತಿರುವ ಕುರಿತು ಪ್ರಸ್ತಾಪಿಸುವುದು.(ಮಾನ್ಯ ಅಬಕಾರಿ ಸಚಿವರು)

## 08. ನಿಯಮ 68ರ ಮೇರೆಗೆ ಸಾರ್ವಜನಿಕ ಮಹತ್ವದ ವಿಷಯದ ಮೇಲಿನ ಚರ್ಚೆ

| | | |
|---|---|---|
| ಅ. | **ಶ್ರೀಯುತರುಗಳಾದ: ಎನ್. ರವಿಕುಮಾರ್ ಹಾಗೂ ಕೆ.ಎಸ್. ನವೀನ್** | ಪಶುಸಂಗೋಪನೆ ಇಲಾಖೆಯಲ್ಲಿನ ಮೊಬೈಲ್ ಆಂಬುಲೆನ್ಸ್‌ಗಳ ನಿರ್ವಹಣೆಯಲ್ಲಿ ಆಗುತ್ತಿರುವ ಭ್ರಷ್ಟಾಚಾರದ ಕುರಿತು |
| ಆ. | **ಶ್ರೀಯುತರುಗಳಾದ: ಮಂಜುನಾಥ್ ಭಂಡಾರಿ, ಎಂ.ಎಲ್. ಅನಿಲ್ ಕುಮಾರ್ ಹಾಗೂ ದಿನೇಶ್ ಗೂಳಿಗೌಡ** | ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಗಳಲ್ಲಿ ಯೋಜನಾ ಪ್ರಾಧಿಕಾರದ ಹೊರಗಿರುವ ಗ್ರಾಮ ಪಂಚಾಯತಿಗಳ ವ್ಯಾಪ್ತಿಯಲ್ಲಿ ಮನೆಗಳ ನಿರ್ಮಾಣಕ್ಕೆ ಕಟ್ಟಡ ಪರವಾನಗಿ ಪಡೆಯಲು ತೊಂದರೆಯಾಗುತ್ತಿರುವ ಕುರಿತು |

## 09. ಅರ್ಧ ಗಂಟೆ ಕಾಲಾವಧಿ ಚರ್ಚೆ

ರಾಜ್ಯಾದ್ಯಂತ ಸರ್ಕಾರದ ಸ್ಮಾರ್ಟ್ ಮೀಟರ್ ಅಳವಡಿಕೆಗೆ ನಿರ್ಧರಿಸಿರುವ ಬಗ್ಗೆ ದಿನಾಂಕ:11.08.2025ರ ಚುಕ್ಕೆ ಗುರುತಿನ **ಪ್ರಶ್ನೆ ಸಂಖ್ಯೆ:05(34) ಮತ್ತು 12(142)ಕ್ಕೆ** ನೀಡಿದ ಉತ್ತರದಿಂದಾಗಿ ಉದ್ಭವಿಸಿದ ವಿಷಯದ ಕುರಿತು **ಶ್ರೀ ಸಿ.ಟಿ. ರವಿ ಮತ್ತು ಶ್ರೀ ಶರವಣ ಟಿ.ಎ** ಅವರುಗಳಿಂದ ಅರ್ಧ ಗಂಟೆ ಕಾಲಾವಧಿ ಚರ್ಚೆ.

**ಕೆ.ಆರ್. ಮಹಾಲಕ್ಷ್ಮಿ**
**ಕಾರ್ಯದರ್ಶಿ**

---

**ಪ್ರತಿ ದಿನದ ವಿಧಾನ ಪರಿಷತ್ತಿನ ಕಾರ್ಯಕಲಾಪಗಳ ಪಟ್ಟಿಯನ್ನು ವೆಬ್‌ಸೈಟ್‌ನಲ್ಲಿಯೂ ಸಹ ಪಡೆದುಕೊಳ್ಳಬಹುದು.**

**www.kla.kar.nic.in/council/council.htm**